ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರವರಿ, 2021

ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಮಿಷನ್ ಯೋಜನೆಗಳ ಬಗ್ಗೆ

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) -

26 (90) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಕಳೆದ ಮೂರು ವರ್ಷಗಳಲ್ಲಿ ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಮಿಷನ್ ಸೇರಿದಂತೆ ಕೇಂದ್ರ ಸರ್ಕಾರದ ಯಾವ್ಯಾವ ಯೋಜನೆಯಡಿ ರಾಜ್ಯಕ್ಕೆ ಎಷ್ಟು ಅನುದಾನ ಬಿಡುಗಡೆಯಾಗಿದೆ ; (ಯೋಜನೆಗಳ ಸಹಿತ ಜಿಲ್ಲಾವಾರು ವಿವರಗಳನ್ನು ನೀಡುವುದು)

(ಆ) ತುಮಕೂರು ಜಿಲ್ಲೆಗೆ ಈ ಯೋಜನೆಗಳಡಿಯಲ್ಲಿ ನೀಡಿರುವ ಅನುದಾನ ಎಷ್ಟು ; (ತಾಲ್ಲೂಕುವಾರು ವಿವರಗಳನ್ನು ಯೋಜನೆಗಳ ಸಹಿತ ನೀಡುವುದು)

(ಇ) National Rural Health Mission(NRHM) ಯೋಜನೆಯಡಿ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಇತರೆ ಆಸ್ಪತ್ರೆಗಳ ದುರಸ್ತಿಗೆ ಹಣ ಮೀಸಲಿಡಲಾಗಿದೆಯೇ;

(ಈ) NRHM ಯೋಜನೆಯಡಿ ಅನುಷ್ಠಾನಗೊಳಿಸಿದ ಯೋಜನೆಗಳಿಗೆ ಖರ್ಚು ಮಾಡಿದ ಮೊತ್ತವೆಷ್ಟು ; (ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಉ) ತುಮಕೂರು ಜಿಲ್ಲೆ, ಶಿರಾ ತಾಲ್ಲೂಕು, ಪಟ್ಟನಾಯಕನಹಳ್ಳಿಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವಾಗಿ NRHM ಯೋಜನೆಯಡಿಯಲ್ಲಿ ಉನ್ನತೀಕರಿಸಲು

ಕ್ರಮ ಕೈಗೊಳ್ಳಲಾಗುವುದೇ ; ಇಲ್ಲದಿದ್ದಲ್ಲಿ, ಯಾವ ಯೋಜನೆಯಡಿ ಈ ಆರೋಗ್ಯ ಕೇಂದ್ರವನ್ನು ಉನ್ನತೀಕರಿಸಲಾಗುವುದು ?